ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 22–8–2017

# ಪತ್ರಿಕಾ ಆಮಂತ್ರಣ

1) ರಾಜ್ಯದ ಬೆಳೆ ವಿಮೆ ಯೋಜನೆಯನ್ನು ಸದೃಢಗೊಳಿಸಿ ರೈತ ಸ್ನೇಹಿ ಮಾಡುವ ಬಗ್ಗೆ ತಾಂತ್ರಿಕ ಕಾರ್ಯಾಗಾರ:

ಪ್ರಾಸ್ತಾವಿಕ ಭಾಷಣ
ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ,
ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷರು

ಉದ್ಘಾಟನಾ ಭಾಷಣ:
ಎಂ. ನಾಡಕರ್ಣಿ
ಖ್ಯಾತ ಅರ್ಥಶಾಸ್ತ್ರಜ್ಞ

ದಿನಾಂಕ: 23–8–2017 ಬುಧವಾರ ಸಮಯ: ಬೆಳಿಗ್ಗೆ 10–30
ಸ್ಥಳ: ಸೆಮಿನಾರ್ ಹಾಲ್, ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆ, ನಾಗರಭಾವಿ.
**(Institute for Social and Economic Change)**

2) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಪರಿಶೀಲಿಸಲು ರಚಿಸಲಾಗಿರುವ ಕರ್ನಾಟಕ ವಿಧಾನ ಮಂಡಲದ ಜಂಟಿ ಪರಿಶೀಲನಾ ಸಮಿತಿಯು ವಿದೇಯಕಕ್ಕೆ ಸಂಬಂಧಿಸಿದಂತೆ ಸಂಘ ಸಂಸ್ಥೆಗಳ ಸಲಹೆ/ಸಾರ್ವಜನಿಕರ ಅಭಿಪ್ರಾಯಗಳನ್ನು ಪಡೆಯುವ ಸಭೆ:

ದಿನಾಂಕ: 23–8–2017 ಬುಧವಾರ, ಸಮಯ: ಬೆಳಿಗ್ಗೆ 11–00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 334, ವಿಧಾನ ಸೌಧ, ಮೂರನೇ ಮಹಡಿ, ಬೆಂಗಳೂರು

3) ಪತ್ರಿಕಾಗೋಷ್ಠಿ:

ಆರ್.ವಿ. ದೇಶಪಾಂಡೆ,
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ದಿನಾಂಕ: 23-8-2017 ಬುಧವಾರ, ಸಮಯ: ಅಪರಾಹ್ನ 12-00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 313, ಕಮಿಟಿ ಹಾಲ್, ವಿಧಾನ ಸೌಧ, ಬೆಂಗಳೂರು

4) ನ್ಯಾಯಮೂರ್ತಿ ಶ್ರೀ ಬಿ. ಅಶೋಕ್ ಹಿಂಚಿಗೇರಿ ಅವರಿಗೆ ಬೀಳ್ಕೋಡುಗೆ ಸಮಾರಂಭ:

ದಿನಾಂಕ: 23-8-2017 ಬುಧವಾರ, ಸಮಯ: ಮಧ್ಯಾಹ್ನ 2-00 ಗಂಟೆಗೆ
ಸ್ಥಳ: ಕೋರ್ಟ್ ಹಾಲ್ ಸಂಖ್ಯೆ 1, ಪ್ರಿನ್ಸಿಪಲ್ ಬೆಂಚ್ ಆಫ್ ಹೈಕೋರ್ಟ್ ಆಫ್ ಕರ್ನಾಟಕ ಬೆಂಗಳೂರು.

## ಪತ್ರಿಕಾ ಪ್ರಕಟಣೆ

88/88

ಬೆಂಗಳೂರು ಆಗಸ್ಟ್ 22(ಕರ್ನಾಟಕ ವಾರ್ತೆ)

# ಕನ್ನಡ ಪುಸ್ತಕ ಪ್ರಾಧಿಕಾರದಿಂದ ಯುವ ಬರಹಗಾರರ ಚೊಚ್ಚಲ ಕೃತಿ ಪ್ರಕಟಿಸಲು ಅರ್ಜಿ ಆಹ್ವಾನ

ಕನ್ನಡ ಪುಸ್ತಕ ಪ್ರಾಧಿಕಾರದ 2016 ನೇ ಸಾಲಿನ ಯುವ ಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಜಿ ಸಲ್ಲಿಸುವವರು ಕನಿಷ್ಠ 18 ರಿಂದ 35 ವರ್ಷ ವಯೋಮಿತಿಯವರಾಗಿರಬೇಕು. ಸ್ವ-ವಿವರವುಳ್ಳ ಮನವಿಯೊಂದಿಗೆ ಧೃಡೀಕೃತ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರ ಅಥವಾ ಜನ್ಮ ದಾಖಾಲಾತಿ ಪ್ರತಿಯನ್ನು ಸಲ್ಲಿಸಬೇಕು.

ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 11.09.2017 ಆಗಿದ್ದು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ- 080-22484516 / 22017704 ಸಂಪರ್ಕಿಸ ಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**89/89**

# ಗಣೇಶ ಚತುರ್ಥಿ ಹಬ್ಬದ ಪ್ರಯುಕ್ತ ಅಗ್ನಿಶಾಮಕ ದಳದಿಂದ ಸುರಕ್ಷತಾ ಕ್ರಮಗಳು

**ಬೆಂಗಳೂರು ಆಗಸ್ಟ್ 22(ಕರ್ನಾಟಕ ವಾರ್ತೆ)**

ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಅಗ್ನಿ ಅಪಘಾತ ಹಾಗೂ ಇತರೆ ಅನಾಹುತಗಳನ್ನು ತಡೆಗಟ್ಟಲು ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಪೋಲೀಸ್ ಮಹಾ ನಿರ್ದೇಶಕರಿಂದ ಸುರಕ್ಷತಾ ಕ್ರಮಗಳನ್ನು ಪಾಲಿಸಲು ಸಾರ್ವಜನಿಕರಲ್ಲಿ ಕೋರಲಾಗಿದೆ.

ಗಣೇಶನನ್ನು ಪ್ರತಿಷ್ಠಾಪಿಸುವ ಪೆಂಡಾಲನ್ನು ಜಿಂಕ್ ಶೀಟ್ ಅಥವಾ ಇತರೆ ಅಗ್ನಿ ನಿರೋಧಕ ವಸ್ತುಗಳನ್ನು ಬಳಸಿ ನಿರ್ಮಿಸುವುದು, ಪೆಂಡಾಲ್‌ಗಳನ್ನು ರಸ್ತೆಯಲ್ಲಿ ಹಾಕದಂತೆ ತಡೆಗಟ್ಟುವುದು ಹಾಗೂ ತುರ್ತು ಪರಿಸ್ಥಿತಿ ಸಂದರ್ಭಗಳಲ್ಲಿ ಪೆಂಡಾಲ್ ತಲುಪಲು ಸೂಕ್ತ ರಸ್ತೆಯನ್ನು ವ್ಯವಸ್ಥೆ ಮಾಡಬೇಕು. ಪೆಂಡಾಲ್‌ಗಳಿಗೆ ಮುಂದೆ ಮತ್ತು ಹಿಂದೆ ಎರಡು ಪ್ರವೇಶ ದ್ವಾರಗಳ ವ್ಯವಸ್ಥೆ ಮಾಡುವುದು, ವಿದ್ಯುತ್ ಸಂಪರ್ಕವನ್ನು ನುರಿತ ಕೆಲಸಗಾರರಿಂದ ಕೈಗೊಳ್ಳುವುದು, ಪ್ರತಿಯೊಂದು ಪೆಂಡಾಲ್ ನಲ್ಲಿ 5 ಕೆ. ಜಿ ಯ ABC ಅಗ್ನಿ ನಂದನ, 9 ಲೀಟರ್ ವಾಟರ್ ಪ್ರೆಜರ್ ಮಾದರಿ ಅಗ್ನಿ ನಂದಕ, 2 ಬಕೆಟುಗಳಲ್ಲಿ ಮರಳು ಮತ್ತು 2 ಬಕೆಟುಗಳಲ್ಲಿ ನೀರನ್ನು ಹಾಗೂ ಕನಿಷ್ಠ 400 ಲೀಟರ್ ನೀರಿನ ಡ್ರಮ್‌ಗಳನ್ನು ಇರಿಸುವುದು ಕಡ್ಡಾಯ, ಪೆಂಡಾಲ್‌ನಲ್ಲಿ ಅಡಿಗೆ ಮತ್ತು ಧೂಮಪಾನಕ್ಕೆ ಅವಕಾಶವಿಲ್ಲ ಎಂಬ ನಾಮ ಫಲಕಗಳನ್ನು ಇರಿಸುವುದು, ಪೆಂಡಾಲ್‌ಗಳಲ್ಲಿ ಪಟಾಕಿ ಇರಿಸಬಾರದು ಹಾಗೂ ಪೆಂಡಾಲ್ ಬಳಿ ಪಟಾಕಿಯನ್ನು ಸಿಡಿಸುವಂತಿಲ್ಲ ಹಾಗೂ ಪ್ರತಿ ಪೆಂಡಾಲ್‌ನಲ್ಲಿ ಅಗ್ನಿಶಾಮಕ ಇಲಾಖೆಯ ದೂರವಾಣಿ ಸಂಖ್ಯೆ 101 ಹಾಗೂ ಸ್ಥಳೀಯ ಪೊಲೀಸ್ ಕಂಟ್ರೋಲ್ ದೂರವಾಣಿ ಸಂಖ್ಯೆ 100 ನ್ನು ಫಲಕಗಳ ಸಹಾಯದಿಂದ ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸುವುದು ಕಡ್ಡಾಯ ಎಂದು ಪ್ರಕಟಣೆ ತಿಳಿಸಿದೆ.

**90/90**

## ಪರಿಶಿಷ್ಟ ಜಾತಿ/ಪಂಗಡದ ಪತ್ರಿಕೋದ್ಯಮ ಪದವಿದರ ಅಭ್ಯರ್ಥಿಗಳಿಗೆ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು ಆಗಸ್ಟ್ 22(ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ, ಪಿ.ಜಿ. ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗಾಗಿ ಆರು ದಿವಸಗಳ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ಇಲಾಖೆಯ ವೆಬ್‌ಸೈಟ್ **www.karnatakainforamtion.gov.in** ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಹಾಗೂ ವಿಶೇಷ ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 21–9–2017 ರ ಸಂಜೆ 5–00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.

ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080– 22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

.